**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ವಿ.ಯೋ/31/Placement Cell/2014-15

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:05-09-2017.

**ಅಧಿಕೃತ ಜ್ಞಾಪನ ಪತ್ರ**

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಪದವಿಯ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಕೆ.ಪಿ.ಎಸ್.ಸಿ., ಯು.ಪಿ.ಎಸ್.ಸಿ. ಹಾಗೂ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ಮಾಹಿತಿ ನೀಡುವುದು, ಸದರಿ ಪರೀಕ್ಷೆಗಳಿಗೆ ಹಾಜರಾಗಲು ಪ್ರೋತ್ಸಾಹಿಸುವುದು, ವಿಶೇಷ ತರಬೇತಿಗಳನ್ನು ಹಮ್ಮಿಕೊಳ್ಳುವುದು ಅಗತ್ಯವೆಂದು ಕಂಡು ಬಂದಿದೆ. ಇದಕ್ಕೆ ಸಂಬಂಧಿಸಿದಂತೆ, ಧಾರವಾಡ ಮತ್ತು ಕಾರವಾರ ಜಿಲ್ಲೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳ, Placement Cellನ ಸಂಚಾಲಕರುಗಳ ಹಾಗೂ Placement Cellನ ಸಮಿತಿಯ ಆಂತರಿಕ (ಖಾಯಂ ಉಪನ್ಯಾಸಕರುಗಳ) ಸದಸ್ಯರುಗಳ ಒಂದು ದಿನದ ಕಾರ್ಯಗಾರವನ್ನು ದಿನಾಂಕ:12-09-2017 ರಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಳಿಯಾಳ ಇಲ್ಲಿ ಹಮ್ಮಿಕೊಳ್ಳಲಾಗಿದೆ. ಸದರಿ ಕಾರ್ಯಾಗಾರದಲ್ಲಿ ಧಾರವಾಡ ಮತ್ತು ಕಾರವಾರ ಜಿಲ್ಲೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳು, Placement Cellನ ಸಂಚಾಲಕರುಗಳ ಹಾಗೂ Placement Cellನ ಸಮಿತಿಯ ಆಂತರಿಕ ಸದಸ್ಯರುಗಳು ಕಡ್ಡಾಯವಾಗಿ ಭಾಗವಹಿಸಲು ಸೂಚಿಸಲಾಗಿದೆ.

ಹಾಗೂ ಗದಗ ಮತ್ತು ಹಾವೇರಿ ಜಿಲ್ಲೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳ, Placement Cellನ ಸಂಚಾಲಕರುಗಳ ಹಾಗೂ Placement Cellನ ಸಮಿತಿಯ ಆಂತರಿಕ (ಖಾಯಂ ಉಪನ್ಯಾಸಕರುಗಳ) ಸದಸ್ಯರುಗಳ ಒಂದು ದಿನದ ಕಾರ್ಯಗಾರವನ್ನು ದಿನಾಂಕ:13-09-2017 ರಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹುಲಕೋಟಿ, ಗದಗ ಜಿಲ್ಲೆ ಇಲ್ಲಿ ಹಮ್ಮಿಕೊಳ್ಳಲಾಗಿದೆ. ಸದರಿ ಕಾರ್ಯಾಗಾರದಲ್ಲಿ ಗದಗ ಮತ್ತು ಹಾವೇರಿ ಜಿಲ್ಲೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳು, Placement Cellನ ಸಂಚಾಲಕರುಗಳ ಹಾಗೂ Placement Cellನ ಸಮಿತಿಯ ಆಂತರಿಕ ಸದಸ್ಯರುಗಳು ಕಡ್ಡಾಯವಾಗಿ ಭಾಗವಹಿಸಲು ಸೂಚಿಸಲಾಗಿದೆ.

**ಸೂಚನೆ:**

1) ಸ್ನಾತಕೋತ್ತರ ಪದವಿ ಇರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಂದ ಪದವಿಯ ಹಾಗೂ ಸ್ನಾತಕೋತ್ತರ ಪದವಿಯ Placement Cellನ ಸಂಚಾಲಕರುಗಳು ಕಡ್ಡಾಯವಾಗಿ ಭಾಗವಹಿಸಲು ಸೂಚಿಸಲಾಗಿದೆ.
2) ಪ್ರತಿ ಕಾಲೇಜಿನಿಂದ Placement Cellನ ಸಂಚಾಲಕರುಗಳೂ ಸೇರಿದಂತೆ ಗರಿಷ್ಠ ಮೂರು ಅಧ್ಯಾಪಕರುಗಳು ಭಾಗಹಿಸುವುದು.

ಕಾಲೇಜು ಶಿಕ್ಷಣ ನಿರ್ದೇಶಕರು.

**ಇವರಿಗೆ:**

1) ಧಾರವಾಡ, ಕಾರವಾರ, ಗದಗ ಮತ್ತು ಹಾವೇರಿ ಜಿಲ್ಲೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಸೂಕ್ತ ಕ್ರಮಕ್ಕಾಗಿ.
2) ಧಾರವಾಡ, ಕಾರವಾರ, ಗದಗ ಮತ್ತು ಹಾವೇರಿ ಜಿಲ್ಲೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ Placement Cellನ (ಪದವಿ ಹಾಗೂ ಸ್ನಾತಕೋತ್ತರ) ಸಂಚಾಲಕರುಗಳಿಗೆ ಹಾಗೂ Placement Cellನ ಸಮಿತಿಯ ಆಂತರಿಕ (ಖಾಯಂ ಉಪನ್ಯಾಸಕರುಗಳ) ಸದಸ್ಯರುಗಳಿಗೆ – ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು:**

1) ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಧಾರವಾಡ – ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
2) ಕಛೇರಿ ಪ್ರತಿ.

PLACEMENT LETTER